ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ಆ.ಅ/ 96 /2017-18.

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 19.12.2017

ಆಡಳಿತಾತ್ಮಕ ಅನುಮೋದನೆ

ವಿಷಯ:- **Package No. 05 (consists of 09 works).**

ಉಲ್ಲೇಖ:1. Govt Order No. ನಅಇ.631 ಎಂಎನ್‌ವೈ 2017 ದಿನಾಂಕ:11.12.2017

2. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 007-16-000035, 007-16-000036, 007-16-000037, 007-16-000038, 007-16-000039, 007-16-000040, 008-16-000033, 008-16-000034, 008-16-000035.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪವಿಭಾಗ) ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ P3089 Special Development works in 7 CMC and 1 TMC area in BBMP" ರ ಅಡಿಯಲ್ಲಿ ಉಲ್ಲೇಖ(2)ರಲ್ಲಿರುವ 09 ಕಾಮಗಾರಿಗಳನ್ನು ಪ್ಯಾಕೇಜ್ ಟೆಂಡರ್‌ನಂತೆ ಕೈಗೊಳ್ಳಲು ರೂ. 450.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿಲಾಗಿದೆ. ಸದರಿ ಕಾಮಗಾರಿಗೆ ಘನಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಂದ ತಾಂತ್ರಿಕ ಮಂಜೂರಾತಿ ಪಡೆದು ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು ಉಲ್ಲೇಖ(1)ರನ್ವಯ ಘನಸರ್ಕಾರದಿಂದ ಸದರಿ ಕಾಮಗಾರಿಗೆ ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ ಹಾಗೂ ಟೆಂಡರ್ ಅನುಮೋದನೆ ನೀಡಲಾಗಿರುತ್ತದೆ. ಆದ್ದರಿಂದ ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
5. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.
6. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು 19/12
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು: 19/12

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.